7	ಕೋಲಾರ	168	22	96.26	78.46
8	ರಾಯಚೂರು	260	40	196.69	
9	ತುಮಕೂರು	91	04	12.50	
	ಒಟ್ಟು	1098	132	584.81	230.63

ಅನುಬಂಧ – 2

ರೇಷ್ಮೆ ಬೆಳೆಗಾರರಿಗೆ ಸಹಾಯಧನ ಮಂಜೂರು ಮಾಡುವುದು

2(12) ಶ್ರೀ ಬಚ್ಚೇಗೌಡ ಕೆ ಪಿ:(ಚಿಕ್ಕಬಳ್ಳಾಪುರ) ಮಾನ್ಯ ಸಣ್ಣ ಕೈಗಾರಿಕೆ ಹಾಗೂ ರೇಷ್ಮೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಚಿಕ್ಕಬಳ್ಳಾಪುರ ವಿಧಾನ ಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ 2008–09 ಮತ್ತು 2009–10ನೇ ಸಾಲಿನಲ್ಲಿ ರೇಷ್ಮೆ ಇಲಾಖೆಯಲ್ಲಿ ಹನಿ ನೀರಾವರಿಗಾಗಿ ಸಹಾಯಧನ ಕೋರಿ ಬಂದ ಅರ್ಜಿಗಳ ಸಂಖ್ಯೆ ಎಷ್ಟು; (ವಿವರಗಳನ್ನು ನೀಡುವುದು)

ಆ) ಬಂದಿದ್ದಲ್ಲಿ ಎಲ್ಲಾ ಅರ್ಜಿದಾರರಿಗೆ ಸಹಾಯ ಧನವನ್ನು ಮಂಜೂರು ಮಾಡಲಾಗಿದೆಯೇ;

ಇ) ಹಾಗಿದ್ದಲ್ಲಿ, ಕಳೆದ 2 ವರ್ಷಗಳಲ್ಲಿ ಸ್ವೀಕೃತಗೊಂಡ ಎಷ್ಟು ಅರ್ಜಿಗಳನ್ನು ಸಹಾಯಧನವನ್ನು ಬಿಡುಗಡೆ ಮಾಡಲಾಗಿದೆ.

ಈ) ಹಾಗಿಲ್ಲದಿದ್ದಲ್ಲಿ, ಸಹಾಯಧನವನ್ನು ಬಿಡುಗಡೆ ಮಾಡಲು ಸರ್ಕಾರಕ್ಕಿರುವ ತೊಂದರೆಗಳೇನು; (ವಿವರಗಳನ್ನು ನೀಡುವುದು)

ಉ) ಸಹಾಯಧನ ಮಂಜೂರು ಮಾಡದೇ ಇರುವುದರಿಂದ ಸ್ಥಳೀಯ ರೈತರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಊ) ಬಂದಿದ್ದಲ್ಲಿ, ಈ ತೊಂದರೆಯನ್ನು ನಿವಾರಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?

ಶ್ರೀ ವೆಂಕಟರಮಣಪ್ಪ(ಸಣ್ಣ ಕೈಗಾರಿಕೆ ಹಾಗೂ ರೇಷ್ಮೆ ಸಚಿವರು):

ಅ) ಚಿಕ್ಕಬಳ್ಳಾಪುರ ವಿಧಾನ ಸಭಾ ಕ್ಷೇತ್ರದ ವ್ಯಾಪ್ತಿಯ ರೇಷ್ಮೆ ಬೆಳೆಗಾರರಿಂದ 2008–09 ಹಾಗೂ 2009–10ನೇ ಸಾಲಿನಲ್ಲಿ ಹನಿ ನೀರಾವರಿ ಪದ್ಧತಿ ಅಳವಡಿಕೆ ಗಾಗಿ ಸಹಾಯಧನ ಕೋರಿ ಕ್ರಮವಾಗಿ 155 ಮತ್ತು 126 ಅರ್ಜಿಗಳು ಬಂದಿವೆ.

ಆ) ಇಲ್ಲ.

ಇ) ಕಳೆದ 2 ವರ್ಷಗಳಲ್ಲಿ ಸಹಾಯಧನ ಕೋರಿ ಬಂದ 281 ಅರ್ಜಿಗಳಲ್ಲಿ 121 ಅರ್ಜಿದಾರರಿಗೆ ರೂ.28.51 ಲಕ್ಷಗಳ ಸಹಾಯದನವನ್ನು ಬಿಡುಗಡೆ ಮಾಡಲಾಗಿದೆ

ಈ) ಸರ್ಕಾರದಿಂದ ಕಾಲಕಾಲಕ್ಕೆ ಬಿಡುಗಡೆಯಾಗುತ್ತಿರುವ ವಂಟನೆಯನ್ನು ರಾಜ್ಯದ ಎಲ್ಲಾ ಜಿಲ್ಲೆಗಳಿಗೂ ಹಂಚಿಕೆ ಮಾಡಬೇಕಾಗುತ್ತದೆ.

ಉ) ಬಂದಿದೆ.

ಊ) ಮುಂಬರುವ ವರ್ಷಗಳಲ್ಲಿ ಹನಿ ನೀರಾವರಿಗೆ ಸಹಾಯಧನ ನೀಡುವ ಕಾರ್ಯಕ್ರಮಕ್ಕೆ ಹೆಚ್ಚು ವಂಟನೆಯನ್ನು ಬಿಡುಗಡೆ ಮಾಡಲು ಕ್ರಮಕೈಗೊಳ್ಳಲಾಗುವುದು.

ಬಗರ್ ಹುಕುಂ ಸಮಿತಿಗಳನ್ನು ರಚಿಸುವುದು

3(13) ಶ್ರೀ ಬಚ್ಚೇಗೌಡ ಕೆ ಪಿ:(ಚಿಕ್ಕಬಳ್ಳಾಪುರ) ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಬಗರ್ ಹುಕುಂ ಸಮಿತಿಗಳನ್ನು ರಚಿಸಲಾಗಿದೆಯೇ;

ಆ) ರಚಿಸಿದ್ದಲ್ಲಿ, ತಾಲ್ಲೂಕುವಾರು ವಿವರಗಳನ್ನು ನೀಡುವುದು;

ಇ) ರಾಜ್ಯದ ಯಾವ ಯಾವ ತಾಲ್ಲೂಕುಗಳಲ್ಲಿ ಬಗರ್ ಹುಕುಂ ಸಮಿತಿಗಳನ್ನು ರಚಿಸಲಾಗಿಲ್ಲ, ಸಮಿತಿಗಳನ್ನು ರಚಿಸಲು ಸರ್ಕಾರಕ್ಕಿರುವ ತೊಂದರೆಗಳೇನು;